# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 854 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಪ್ರತಾಪ್ ಸಿಂಹ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 22/02/2024 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಂಖ್ಯೆ ಎಷ್ಟು; | ರಾಜ್ಯದಲ್ಲಿ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರಿಗೆ ಸಂಬಂಧಿಸಿದಂತೆ ಯಾವುದೇ ಸಮೀಕ್ಷೆ ನಡೆಸಿರುವುದಿಲ್ಲ. ಆದ್ದರಿಂದ, ಮಂಡಳಿಯಲ್ಲಿ ಸದರಿ ಕಾರ್ಮಿಕರ ನಿಖರ ಸಂಖ್ಯೆ ಲಭ್ಯವಿರುವುದಿಲ್ಲ. ಆದರೆ, ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಸಾರಿಗೆ ಇಲಾಖೆಯಿಂದ ಖಾಸಗಿ ವಾಣಿಜ್ಯ ವಾಹನವನ್ನು ಚಲಾಯಿಸಲು ಊರ್ಜಿತ ಚಾಲನ ಪರವಾನಗಿ ಪಡೆದ ಎಲ್ಲಾ ಚಾಲಕರನ್ನು ಫಲಾನುಭವಿಗಳಾಗಿ ಗುರುತಿಸಿದೆ. ಸಾರಿಗೆ ಇಲಾಖೆಯ ದತ್ತಾಂಶದ ಪ್ರಕಾರ 8,40,561 ಚಾಲಕರು ಈ ಯೋಜನೆಗೆ ಒಳಪಡುತ್ತಾರೆ. |
| (ಆ) | ಸದರಿ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕಲ್ಯಾಣಕ್ಕಾಗಿ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಮತ್ತು ಯೋಜನೆಗಳೇನು ಹಾಗೂ ವಿನಿಯೋಗಿಸುತ್ತಿರುವ ಅನುದಾನದ ವಿವರಗಳೇನು; | ಪ್ರಸ್ತುತ ಮಂಡಳಿಯು ಜಾರಿಗೊಳಿಸುತ್ತಿರುವ, ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆಯಡಿ ಚಾಲಕರು, ನಿರ್ವಾಹಕರು ಹಾಗು ಕ್ಲೀನರ್‌ಗಳಿಗೆ ಈ ಕೆಳಕಂಡ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಲಾಗುತ್ತಿದೆ:-<br><br>**(ಅ) ಅಪಘಾತ ಪರಿಹಾರ ಸೌಲಭ್ಯ :** ಈ ಯೋಜನೆಯಡಿ, ಅಪಘಾತದಿಂದ ಮರಣ ಹೊಂದಿದ ಪ್ರಕರಣಗಳಲ್ಲಿ ನಾಮನಿರ್ದೇಶಿತರಿಗೆ ರೂ. 5 ಲಕ್ಷದ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷದ ವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚದ ಮರುಪಾವತಿ ನೀಡಲಾಗುತ್ತಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ:** ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಪದವಿಪೂರ್ವ ವ್ಯಾಸಂಗದವರೆಗೆ ವಾರ್ಷಿಕ ತಲಾ ರೂ.10,000/-ಗಳ ಶೈಕ್ಷಣಿಕ ಸಹಾಯಧನ ನೀಡಲಾಗುತ್ತಿದೆ.<br>ಯೋಜನೆಯ ಜಾರಿಗಾಗಿ ಪ್ರಸ್ತತ ಸಾಲಿನಲ್ಲಿ ಸರ್ಕಾರವು ಬಿಡುಗಡೆಗೊಳಿಸಿದ ಹಾಗೂ ಈವರೆಗೆ ವಿನಿಯೊಗಿಸಿದ ಅನುದಾನದ ವಿವರ ಈ ಕೆಳಗಿನಂತಿದೆ:-<br>(ರೂ. ಲಕ್ಷಗಳಲ್ಲಿ)<br>**ಬಿಡುಗಡೆಯಾದ ಅನುದಾನ**: 833.29<br>**ವಿನಿಯೊಗಿಸಿದ ಅನುದಾನ**: 789.41 |

(ರೂ. ಲಕ್ಷಗಳಲ್ಲಿ)

| ಬಿಡುಗಡೆಯಾದ ಅನುದಾನ | ವಿನಿಯೊಗಿಸಿದ ಅನುದಾನ |
|---|---|
| 833.29 | 789.41 |

| | | |
|---|---|---|
| (ಇ) | ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಮತ್ತು ಕಲ್ಯಾಣ ಮಂಡಳಿ ರಚಿಸುವಂತೆ ಇರುವ ಕಾರ್ಮಿಕರ ಬಹುದಿನದ ಬೇಡಿಕೆ ಕುರಿತು ಸರ್ಕಾರ ಇದುವರೆಗೆ ಏನು ಕ್ರಮ ಕೈಗೊಂಡಿದೆ; | ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯ ಕಲ್ಪಿಸಲು ಪ್ರತ್ಯೇಕ ಮಂಡಳಿಯನ್ನು ರಚಿಸಲು ಉದ್ದೇಶಿಸಲಾಗಿದ್ದು, ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಿಸಲು "ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕಲ್ಯಾಣ ವಿಧೇಯಕ-2024" (Karnataka Motor Transport and Other Allied Workers Social Security and Welfare Bill, 2024) ಅನ್ನು ಸಿದ್ಧಪಡಿಸಲಾಗಿದೆ.. |
| (ಈ) | ಯಾವ ಕಾಲಮಿತಿಯೊಳಗೆ ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮತ್ತು ಕಲ್ಯಾಣ ಮಂಡಳಿ ರಚಿಸಿ ಕಾರ್ಮಿಕರಿಗೆ ಅನುಕೂಲ ಮಾಡಿಕೊಡಲಾಗುವುದು? | ಮೇಲ್ಕಂಡ ವಿಧೇಯಕವು ಶಾಸನವಾದ ನಂತರ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲು ಶೀಘ್ರವಾಗಿ ಸಮಗ್ರ ಯೋಜನೆಯನ್ನು ರೂಪಿಸಿ ಜಾರಿಗೊಳಿಸಲಾಗುತ್ತದೆ. |

**ಕಾಇ 127 ಎಲ್ ಇಟಿ 2024**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**